ಮೈಸೂರ ಗೆಜೆಟ್.

ನಂ. 4] ಸರ್ಕಾರವಿಂದ ಪ್ರಾಯಿಷ್ ಆದ್ದು. [1895.

ಬೆಂಗಳೂರು, ಗುರುವಾರ, ಫಿಬ್ರವರಿ ತಾ|| 7, ಸ್ ೯ 1895.

ವಿಷಯ ಸೂಚಿಕೆ.

1ನೇ ಭಾಗ—ಮೈಸೂರು ಮಹಾರಾಜ ರಾಜಾಸಾಹೆಬ್ ಬಹದ್ದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್‌ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರೆಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜ್‌ರು, ಡಿ|| ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರ್‌ಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ, ಕಾಲಸ್ಥಿತಿ ರಿಪೋರ್ಟುಗಳು; ಪೋಸ್ಟ್‌ಆಫಿಸ್ ನೋಟಿಸ್‌ಗಳು.

3ನೇ ಭಾಗ—ಶ್ರೀಮನ್ ಮಹಾರಾಜ ರಾಜಾಸಾಹೆಬ್ ಬಹದ್ದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷನ್‌ಗಳು.—ಇಲ್ಲ.

4ನೇ ಭಾಗ—ಸರ್ಕಾರೀ ಕಾಗದ ಪತ್ರಗಳು.—ಇಲ್ಲ.

ಪ್ರತಿ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟ ಸಂಖೆ ಕೊಡಲ್ಪಡುತ್ತೆ.

೧ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೆಬ್ ಬಹದ್ದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಮೈಸೂರು, ತಾರೀಖು 1ನೇ ಫೆಬ್ರವರಿ 1895.

ನಂ. 60—D. H. O.

ಘನವನ್ನು ಹೊಂದಿದ ಶ್ರೀ ಕೃಷ್ಣರಾಜ ಒಡೆಯರ್ ಬಹದ್ದೂರವರು, ಮೈಸೂರು ಸಂಸ್ಥಾನದ ಸಿಂಹಾಸನಾರೂಢರಾಗಿ ಪಟ್ಟಾಭಿಷಿಕ್ತರಾಗಿರುತ್ತಾರೆಂಬ ಇದರಡಿ ಕಂಡ ಪ್ರಸಿದ್ಧಪತ್ರಿಕೆಯು ಸರ್ವರ ತಿಳುವಳಿಕೆ ಬಗ್ಗೆಯಾಗಿ ಇದರ ದೆಕೆಯಿಂದ ಪ್ರಕಟ ಪಡಿಸಲ್ಪಟ್ಟಿರುತ್ತೆ.

ಹುಕುಂ ಬವೋಜೆಬ್,

ಟಿ. ಆನಂದರಾವ್,

ಚೀಫ್ ಸೆಕ್ರಿಟರಿ.